ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 13/4/21

# ಮಸ್ಕಿ ಬಿಜೆಪಿ ಅಭ್ಯರ್ಥಿಗೆ ಸೋಂಕು ಸಿಎಂ ಹೋಂ ಕ್ವಾರಂಟೈನ್‌ಗೆ ಪಟ್ಟು

13/4/21

ರಾಯಚೂರು: ಮಸ್ಕಿ ಉಪಚುನಾವಣೆಯ ಬಿಜೆಪಿ ಅಭ್ಯರ್ಥಿ ಪ್ರತಾಪ್‌ಗೌಡ ಪಾಟೀಲ್ ಅವರಿಗೆ ಕೋವಿಡ್ ದೃಢಪಟ್ಟಿದೆ. ಅವರ ಸಂಪರ್ಕಕ್ಕೆ ಬಂದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಬಿಜೆಪಿಯ ಪ್ರಮುಖ ನಾಯಕರು ಹಾಗೂ ಮಸ್ಕಿ ಚುನಾವಣಾ ಪ್ರಚಾರದಲ್ಲಿ ಪಾಲ್ಗೊಂಡ ಸಚಿವರು, ಶಾಸಕರನ್ನು ಹೋಂ ಕ್ವಾರಂಟೈನ್‌ಗೊಳಿಪಡಿಸಬೇಕೆಂದು ಎನ್‌ಆರ್‌ಬಿಸಿ 5ಎ ಕಾಲುವೆ ಹೋರಾಟ ಸಂಯುಕ್ತ ವೇದಿಕೆ ಮುಖಂಡ ಆರ್.ಮಾನಸಯ್ಯ ಆಗ್ರಹಿಸಿದರು.



ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬಿಜೆಪಿ ನಾಯಕರು ಕೋವಿಡ್ ನಿಯಮ ಉಲ್ಲಂಘಿಸುತ್ತಿದ್ದಾರೆ. ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಬಿಜೆಪಿ ನಾಯಕರು ಕ್ವಾರಂಟೈನ್‌ಗೊಳಗಾಗದೇ ಚುನಾವಣೆ ಪ್ರಚಾರದಲ್ಲಿ ತೊಡಗಿರುವುದು ಆತಂಕ ಸೃಷ್ಟಿಯಾಗಿದೆ ಎಂದರು. 76 ವರ್ಷದ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಅವರಿಗೆ ಆರೋಗ್ಯಕ್ಕಿಂತ ಚುನಾವಣೆಯೇ ಮುಖ್ಯವಾಗಿದೆಯೇ ಎಂದು ಪ್ರಶ್ನಿಸಿದರು. ಪ್ರತಾಪಗೌಡ ಪಾಟೀಲ್ ಅವರು ಕೋವಿಡ್ ವ್ಯಾಕ್ಸಿನ್ ಮೊದಲನೇ ಡೋಸ್ ಪಡೆದರೂ ಕೊರೊನಾ ದೃಢಪಟ್ಟಿದ್ದು, ದುರಾದೃಷ್ಟ ಎಂದರು.